KARNATAKA NEERAVARI NIGAM LTD
7368
4/1/2002
CAC(Adm)
CS
TA II GM(F)

(14)

**ಕರ್ನಾಟಕ ಸರ್ಕಾರದ ನಡವಳಿಗಳು**

**(ಜಲ ಸಂಪನ್ಮೂಲ ಸಚಿವಾಲಯ)**

ವಿಷಯ:- ಹಾವೇರಿ ಜಿಲ್ಲೆ ಹಾನಗಲ್ ತಾಲ್ಲೋಕು ಬಸಾಪುರ ಏತ ನೀರಾವರಿ ಯೋಜನೆಯನ್ನು ಅನುಷ್ಠಾನಕ್ಕಾಗಿ ಕರ್ನಾಟಕ ನೀರಾವರಿ ನಿಗಮಕ್ಕೆ ವಹಿಸುವ ಬಗ್ಗೆ.

+++++

**ಓದಲಾಗಿದೆ:-**

ಸರ್ಕಾರಿ ಆದೇಶ ಸಂಖ್ಯೆ: ನೀ ಇ 20 ಎಂಎಂಐ 96 ದಿನಾಂಕ 9-4-1996

**ಪ್ರಸ್ತಾವನೆ:-**

ಬಸಾಪುರ ಏತ ನೀರಾವರಿ ಯೋಜನೆಯನ್ನು ಹಾವೇರಿ ಜಿಲ್ಲೆಯ (ಈ ಹಿಂದೆ ಧಾರವಾಡ ಜಿಲ್ಲೆ) ಹಾನಗಲ್ ತಾಲ್ಲೋಕಿನ ಬಸಾಪುರ ಗ್ರಾಮದ ಬಳಿ ವರದಾ ನದಿಯಿಂದ ನೀರನ್ನು ಎತ್ತಿ 2266 ಹೆಕ್ಟೇರ್ ಜಮೀನಿಗೆ ನೀರಾವರಿ ಒದಗಿಸಲು ರೂಪಿಸಲಾಗಿದ್ದು, ಯೋಜನೆಯ ರೂ.936.00 ಲಕ್ಷಗಳ ಪರಿಷ್ಕೃತ ಅಂದಾಜಿಗೆ ಮೇಲೆ ಓದಲಾದ ಸರ್ಕಾರಿ ಆದೇಶದಲ್ಲಿ ಆಡಳಿತಾತ್ಮಕ ಮಂಜೂರಾತಿ ನೀಡಲಾಗಿದೆ. ಯೋಜನೆಯ ಕಾಮಗಾರಿಗಳನ್ನು ಪ್ರಾರಂಭಿಸಲಾಗಿದ್ದು, ಈವರೆಗೆ ರೂ.135.00 ಲಕ್ಷ ವೆಚ್ಚವಾಗಿರುತ್ತದೆ.

ಯೋಜನೆಯ ಅನುಷ್ಠಾನಕ್ಕೆ ಸಂಪನ್ಮೂಲಗಳನ್ನು ಕ್ರೋಢೀಕರಿಸಿ ತ್ವರಿತಗತಿಯಲ್ಲಿ ಪೂರ್ಣಗೊಳಿಸುವ ಸಲುವಾಗಿ ಯೋಜನೆಯನ್ನು ಕರ್ನಾಟಕ ನೀರಾವರಿ ನಿಗಮಕ್ಕೆ ವರ್ಗಾಯಿಸಲು ಸೂಕ್ತವೆಂದು ನಿರ್ಧರಿಸಲಾಯಿತು.

ಈ ಪ್ರಸ್ತಾವನೆಯನ್ನು ಸರ್ಕಾರದ ಮಟ್ಟದಲ್ಲಿ ಪರಿಶೀಲಿಸಲಾಗಿದೆ.

**ಸರ್ಕಾರಿ ಆದೇಶ ಸಂಖ್ಯೆ: ನೀ ಇ 64 ಎಂಎಂಐ 2001, ಬೆಂಗಳೂರು, ದಿನಾಂಕ 5-1-2002.**

ತುಂಗಾ ಮೇಲ್ದಂಡೆ ಯೋಜನಾ ವಲಯದ ಕಾರ್ಯವ್ಯಾಪ್ತಿಯಲ್ಲಿರುವ ಬಸಾಪುರ ಏತ ನೀರಾವರಿ ಯೋಜನೆಯನ್ನು ಅನುಷ್ಠಾನಗೊಳಿಸಲು ಈ ಕೂಡಲೇ ಜಾರಿಗೆ ಬರುವಂತೆ ಕರ್ನಾಟಕ ನೀರಾವರಿ ನಿಗಮದ ಕಾರ್ಯವ್ಯಾಪ್ತಿಗೆ ವರ್ಗಾಯಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(signature) 5/1/02
(ಆರ್. ಶಿವಶಂಕರ್),
ಸರ್ಕಾರದ ಅಧೀನ ಕಾರ್ಯದರ್ಶಿ(ತಾಂತ್ರಿಕ-1)
ಜಲ ಸಂಪನ್ಮೂಲ ಇಲಾಖೆ.

ಗೆ,

1) ಮಹಾಲೇಖಪಾಲರು, (ಲೆಕ್ಕ ಪತ್ರ / ಲೆಕ್ಕ ಪರಿಶೋಧನೆ) ಕರ್ನಾಟಕ, ಬೆಂಗಳೂರು.
2) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ, ಬೆಂಗಳೂರು.
3) ಮುಖ್ಯ ಇಂಜಿನಿಯರ್, ತುಂಗಾ ಮೇಲ್ದಂಡೆ ಯೋಜನಾ ವಲಯ, ಶಿವಮೊಗ್ಗ.
4) ಮಾನ್ಯ ಜಲ ಸಂಪನ್ಮೂಲ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು
5) ವಿಶೇಷಾಧಿಕಾರಿ (ಲೋಕೋಪಯೋಗಿ) (ಆರ್ಥಿಕ ಕೋಶ) ಹಾಗೂ ಪದನಿಮಿತ್ತ ಉಪಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು-1.
6) ಶಾಖಾ ರಕ್ಷಾ ಕಡತ: ಹೆಚ್ಚುವರಿ ಪ್ರತಿಗಳು.

ಬಿ.ಆರ್. 5122